KARNATAKA SUCCESS NO 1
Kannada Daily
ಸಂಪಾದಕರು/ಮಾಲೀಕರು
ರಾಧಿಕಾ ಎ.ಆರ್.
Volume: 02 Issue-112
ಶನಿವಾರ 01 ಮಾರ್ಚ್ 2025
Price: 2.00 Rs. Pages - 2

RNI: KARKAN/2023/88508

# ಕರ್ನಾಟಕ ಸಕ್ಸಸ್ ನಂ 1

ಕನ್ನಡ ದಿನಪತ್ರಿಕೆ

ನಮ್ಮ ಸಂಪರ್ಕ: ಇ–ಮೇಲ್: karnatakasuccessno1ar@gmail.com ಮೊಬೈಲ್: 9380988530, 9606988508

## ಮಾ.2ರಂದು ವಿವಿಧೆಡೆ ವಿದ್ಯುತ್ ವ್ಯತ್ಯಯ

ತುಮಕೂರು: ಬೆಸ್ಕಾಂ ಗ್ರಾಮೀಣ ಉಪವಿಭಾಗ–1ರ ವ್ಯಾಪ್ತಿಯಲ್ಲಿ ಲಿಂಕ್ ಲೈನ್ ಕಾಮಗಾರಿ ಕೈಗೊಂಡಿರುವುದರಿಂದ ಮಾರ್ಚ್ 2ರಂದು ಬೆಳಿಗ್ಗೆ 10 ರಿಂದ ಸಂಜೆ 5 ಗಂಟೆಯವರೆಗೆ ಬೆಳ್ಳಾವಿ ಟೌನ್, ಸುಗುಣ, ದೊಡ್ಡವೀರನಹಳ್ಳಿ, ಸಿಂಗೀಪುರ, ದೊಡ್ಡೇರಿ, ಕಾಗ್ಗೆರೆ, ಅಸಲೀಪುರ, ಮಶಣಾಪುರ, ಹರಿವಣಪುರ, ನಾಗಾರ್ಜುನಹಳ್ಳಿ, ಚನ್ನೇನಹಳ್ಳಿ, ಕರಲುಪಾಳ್ಯ, ಚಿಕ್ಕಬೆಳ್ಳಾವಿ, ಮಾವಿನಕುಂಟೆ, ತಿಮ್ಮಲಾಪುರ, ಬಾಣಾವರ, ಲಕ್ಕನಹಳ್ಳಿ, ಅಪ್ಪಿನಾಯಕನಹಳ್ಳಿ, ಬ್ಯಾಲ, ಟಿ.ಗೊಲ್ಲಹಳ್ಳಿ, ಬುಗುಡನಹಳ್ಳಿ ಗ್ರಾಮ ಸೇರಿದಂತೆ ಸುತ್ತಮುತ್ತಲಿನ ಹಳ್ಳಿಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದ್ದು, ಗ್ರಾಹಕರು ಸಹಕರಿಸಬೇಕೆಂದು ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಮನವಿ ಮಾಡಿದ್ದಾರೆ.

## ‘ಗ್ರಾಮಗಳ ಅಭಿವೃದ್ಧಿಗೆ ಶ್ರಮಿಸಿ:’ ರಾಜ್ಯ ಸರ್ಕಾರದ ನವದೆಹಲಿ ವಿಶೇಷ ಪ್ರತಿನಿಧಿ ಜಯಚಂದ್ರ ಕರೆ

ತುಮಕೂರು: ಗ್ರಾಮಗಳು ಅಭಿವೃದ್ಧಿಯಾದರೆ ದೇಶ ಅಭಿವೃದ್ಧಿಯಾದಂತೆ. ಈ ನಿಟ್ಟಿನಲ್ಲಿ ಗ್ರಾಮಗಳ ಅಭಿವೃದ್ಧಿಗೆ ಪಂಚಾಯತಿ ಚುನಾಯಿತ ಪ್ರತಿನಿಧಿಗಳು ಹಾಗೂ ಅಧಿಕಾರಿ–ನೌಕರರು ಶ್ರಮಿಸಬೇಕೆಂದು ನವದೆಹಲಿಯ ಕರ್ನಾಟಕ ವಿಶೇಷ ಪ್ರತಿನಿಧಿ ಹಾಗೂ ಶಿರಾ ಶಾಸಕ ಟಿ.ಬಿ. ಜಯಚಂದ್ರ ಕರೆ ನೀಡಿದರು.




ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಹಾಗೂ ಜಿಲ್ಲಾ ಪಂಚಾಯತಿ ಸಹಯೋಗದಲ್ಲಿ ಶುಕ್ರವಾರ ನಗರದ ಜಿಲ್ಲಾ ಮಹಾತ್ಮಗಾಂಧಿ ಒಳಾಂಗಣ ಕ್ರೀಡಾಂಗಣದಲ್ಲಿ ಹಮ್ಮಿಕೊಂಡಿದ್ದ ಜಿಲ್ಲಾ ವ್ಯಾಪ್ತಿಯ ಗ್ರಾಮ ಪಂಚಾಯಿತಿ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ತರಬೇತಿ ಹಾಗೂ ಗ್ರಾಮ ಪಂಚಾಯಿತಿ ಸಿಬ್ಬಂದಿಗಳಿಗೆ ಅನುಮೋದನಾ ಪತ್ರ ವಿತರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಗ್ರಾಮೀಣ ಪ್ರದೇಶಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವಲ್ಲಿ ಅಧಿಕಾರಿ–ನೌಕರರು ಹಿಂದುಳಿಯಬಾರದು. ಪಂಚಾಯತಿ ವ್ಯಾಪ್ತಿಯ ಜನರು ಉದ್ಯೋಗ ವಿಲ್ಲದೆ ಹಸಿವಿನಿಂದ ಬಳಲಬಾರದೆಂಬ ದೃಷ್ಟಿ ಯಿಂದ ಮಾಜಿ ಪ್ರಧಾನಿ ದಿ॥ ಮನ್‌ಮೋಹನ್ ಸಿಂಗ್ ಅವರು ಜಾರಿಗೆ ತಂದಿರುವ “ಮಹಾತ್ಮ ಗಾಂಧಿ ಉದ್ಯೋಗ ಖಾತ್ರಿ(ನರೇಗಾ)” ಯೋಜನೆಯಿಂದ ಎಷ್ಟೋ ಬಡಕುಟುಂಬಗಳು ಆರ್ಥಿಕ ಸಂಕಷ್ಟದಿಂದ ಪಾರಾಗಿವೆ. ನರೇಗಾದಂತಹ ವಿಶೇಷ ಯೋಜನೆ ಜಾರಿಗೆ ಸಂಬಂಧಿಸಿದಂತೆ ಪ್ರಾರಂಭದಲ್ಲಿ ಹಲವಾರು ಟೀಕೆಗಳು ವ್ಯಕ್ತವಾದರೂ ಯೋಜನೆ ಯಶಸ್ವಿಯಾಗಿ ಅನುಷ್ಠಾನವಾಗುತ್ತಿದೆ. ಜಿಲ್ಲೆಯಲ್ಲಿ ನರೇಗಾ ಯೋಜನೆಯಡಿ 750 ಕೋಟಿ ರೂ. ಅಂದಾಜು ವೆಚ್ಚದಲ್ಲಿ ಕಾಮಗಾರಿ ಗಳನ್ನು ಅನುಷ್ಠಾನ ಮಾಡುತ್ತಿರುವುದು ಯೋಜನೆಯ ಯಶಸ್ಸಿಗೆ ನಿದರ್ಶನವಾಗಿದೆ. ಬಡವರಿಗೆ, ನಿರ್ಗತಿಕರಿಗೆ ಈ ಯೋಜನೆ ಶಕ್ತಿ ನೀಡಿದೆ ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಮಹಾತ್ಮಗಾಂಧಿ ನರೇಗಾ ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನ ಮಾಡಲಾಗುತ್ತಿದ್ದು, ಶಾಲಾಭಿವೃದ್ಧಿ ಕಾಮಗಾರಿಗಳಾದ ಕಾಂಪೌಂಡ್, ಶೌಚಾಲಯ, ಆಟದ ಮೈದಾನ, ಗ್ರಾಮೀಣ ಪ್ರದೇಶಗಳಲ್ಲಿ ಮೂಲಭೂತ ಸೌಕರ್ಯಗಳಾದ ಚರಂಡಿ, ರಸ್ತೆ, ಅಂಗನವಾಡಿ, ಆಸ್ಪತ್ರೆಗಳನ್ನು ಅಭಿವೃದ್ಧಿ ಪಡಿಸುವ ಮೂಲಕ ಜಿಲ್ಲೆಯು ರಾಜ್ಯದಲ್ಲಿ ಮಾದರಿಯಾಗಿದೆ ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಗ್ರಾಮ ಪಂಚಾಯಿತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ 766 ಸಿಬ್ಬಂದಿಯವರಿಗೆ ಅನುಮೋದನೆ ಪತ್ರ ನೀಡುವ ಮೂಲಕ ಖಾಯಂಗೊಳಿಸಿರುವುದಕ್ಕೆ ಜಿಲ್ಲಾ ಪಂಚಾಯತಿಗೆ ಅಭಿನಂದಿಸುತ್ತೇನೆ. ರಾಜ್ಯದಲ್ಲಿ ಪ್ರಪ್ರಥಮ ಬಾರಿಗೆ ಏಕಕಾಲದಲ್ಲಿ 766 ಜನಕ್ಕೆ ಅನುಮೋದನಾ ಪತ್ರ ನೀಡಿರುವುದು ಜಿಲ್ಲೆಗೆ ಹೆಮ್ಮೆ ತಂದಿದೆ. ಇತರೆ ಜಿಲ್ಲೆಗಳಲ್ಲಿಯೂ ಇಂತಹ ಕಾರ್ಯಕ್ರಮ ಏರ್ಪಡಿಸಿ ಪಂಚಾಯತಿ ನೌಕರರಿಗೆ ಅನುಮೋದನೆ ಪತ್ರ ನೀಡುವಂತಾಗಬೇಕು ಎಂದು ತಿಳಿಸಿದರು.

ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಮಾತನಾಡಿ, ಭಾರತಕ್ಕೆ ಸ್ವಾತಂತ್ರ್ಯ ಲಭಿಸಿ 77 ವರ್ಷಗಳು ಕಳೆದಿದ್ದರೂ ದೇಶದ ಎಲ್ಲಾ ಗ್ರಾಮಗಳು ಅಭಿವೃದ್ಧಿಯಾದಾಗ ಮಾತ್ರ ನಿಜವಾದ ಸ್ವಾತಂತ್ರ್ಯ ಸಿಕ್ಕಿದಂತಾಗುತ್ತದೆ. ಗಾಂಧೀಜಿಯವರ ಗ್ರಾಮ ಸ್ವರಾಜ್ಯದ ಕನಸನ್ನು ನಾವೆಲ್ಲಾ ನನಸು ಮಾಡಬೇಕು. ಅಧಿಕಾರ ವಿಕೇಂದ್ರೀಕರಣಕ್ಕಾಗಿ ಪಂಚಾಯತಿ ವ್ಯವಸ್ಥೆಯನ್ನು ಜಾರಿಗೊಳಿಸಲಾಗಿದೆ. ಈ ನಿಟ್ಟಿನಲ್ಲಿ ಪಂಚಾಯತಿ ಚುನಾಯಿತ ಪ್ರತಿನಿಧಿಗಳು ಹಾಗೂ ಅಧಿಕಾರಿ–ನೌಕರರು ಗ್ರಾಮವನ್ನು ಅಭಿವೃದ್ಧಿಯತ್ತ ಕೊಂಡೊಯ್ಯಬೇಕು. ಬೇಸಿಗೆ ಸಮೀಪಿಸಿರುವುದರಿಂದ ತಮ್ಮ ವ್ಯಾಪ್ತಿಯ ಗ್ರಾಮೀಣ ಜನರಿಗೆ ಶುದ್ಧ ಕುಡಿಯುವ ನೀರಿಗೆ ತೊಂದರೆಯಾಗದಂತೆ ಕ್ರಮವಹಿಸಬೇಕೆಂದು ಸಲಹೆ ನೀಡಿದರು.

ಗ್ರಾಮದ ಆರೋಗ್ಯ, ಮಕ್ಕಳ ಶಿಕ್ಷಣ, ಕ್ರೀಡೆ, ಸ್ವಚ್ಛತೆಯತ್ತ ಗಮನಹರಿಸಬೇಕು. ಸ್ವಾಸ್ಥ ಗ್ರಾಮವನ್ನಾಗಿ ರೂಪಿಸಬೇಕು. ಸಕಾಲದಲ್ಲಿ ತೆರಿಗೆ ಸಂಗ್ರಹಿಸಿ ಗ್ರಾಮ ಪಂಚಾಯತಿಯನ್ನು ಆರ್ಥಿಕವಾಗಿ ಸದೃಢಗೊಳಿಸಬೇಕು ಎಂದು ತಿಳಿಸಿದರು.

ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಜಿ. ಪ್ರಭು ಮಾತನಾಡಿ, ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯತಿಗಳಿಗೆ ಕುಡಿಯುವ ನೀರು, ಚರಂಡಿ, ರಸ್ತೆ, ಬೀದಿ ದೀಪ, ಸ್ವಚ್ಛತೆ ಸೇರಿದಂತೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಪಂಚಸೂತ್ರಗಳಡಿ ಅಧಿಕಾರಿಗಳು ಕಾರ್ಯನಿರ್ವಹಿಸುತ್ತಿದ್ದಾರೆ. ಜಿಲ್ಲೆಯಲ್ಲಿ ಪಂಚಾಯತಿ ಮಟ್ಟದಲ್ಲಿ 90 ಕೋಟಿ ರೂ.ಗಳನ್ನು ವೆಚ್ಚದಲ್ಲಿ 9ಲಕ್ಷ ಮೀಟರ್ ಚರಂಡಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ. ಈಗಾಗಲೇ 63 ಕೋಟಿ ರೂ. ವೆಚ್ಚದಲ್ಲಿ ಚರಂಡಿ ನಿರ್ಮಾಣ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿದೆ.

(2ನೇ ಪುಟಕ್ಕೆ)

## ನೀರಾ ಇಳಿಸುತ್ತಿದ್ದ ರೈತನ ಮೇಲೆ ಅಬಕಾರಿ ದಾಳಿ: ಇಲಾಖೆ ವಿರುದ್ಧ ಹೊಸಹಳ್ಳಿ ಚಂದ್ರಣ್ಣ ಕಿಡಿ





ಹುಳಿಯಾರು: ಹುಳಿಯಾರು ಹೋಬಳಿ ಕಂಪನಹಳ್ಳಿ ಬಳಿಯ ತೆಂಗಿನ ತೋಟವೊಂದರಲ್ಲಿ ನೀರಾ ಇಳಿಸುತ್ತಿದ್ದ ರೈತನ ಮೇಲೆ ಅಬಕಾರಿ ಅಧಿಕಾರಿಗಳು ಶುಕ್ರವಾರ ದಿಢೀರ್ ದಾಳಿ ಮಾಡಿದ್ದರು. ನೀರಾ ಇಳಿಸುತ್ತಿದ್ದ ರೈತ ಈರಣ್ಣ ಅವರನ್ನು ಬಂಧಿಸಿ ನೀರಾ ಇಳಿಸಲು ಬಳಸುತ್ತಿದ್ದ ಪರಿಕರಗಳನ್ನು ವಶ ಪಡಿಸಿಕೊಂಡರು. ವಿಚಾರ ತಿಳಿದ ರೈತ ಸಂಘದ ರಾಜ್ಯಾಧ್ಯಕ್ಷ ಹೊಸಹಳ್ಳಿ ಚಂದ್ರಣ್ಣ ಘಟನಾ ಸ್ಥಳಕ್ಕೆ ದೌಡಾಯಿಸಿ ಅಬಕಾರಿ ಜೀಪಿಗೆ ಅಡ್ಡ ಕುಳಿತು ಈರಣ್ಣ ಅವನ್ನು ಬಿಡಿಸಿಕೊಂಡ ಪ್ರಕರಣ ನಡೆದಿದೆ.

ರೈತ ಹೋರಾಟಗಾರ ಪ್ರೊ.ಎಂ.ಡಿ.ನಂಜುಂಡಸ್ವಾಮಿ ಅವರ ನೀರಾ ಚಳುವಳಿಯಿಂದ ಪ್ರಭಾವಿತರಾಗಿ ಹುಳಿಯಾರಿನ ಈರಣ್ಣ ಕಳೆದ ಮೂರು ದಶಕಗಳಿಂದಲೂ ಈ ಭಾಗದಲ್ಲಿ ನೀರಾ ಇಳಿಸುವ ಮೂಲಕ ನೀರಾ ಈರಣ್ಣನೆಂದೆ ಪ್ರಖ್ಯಾತರಾಗಿದ್ದಾರೆ. ಎಂದಿನಂತೆ ಶುಕ್ರವಾರವೂ ಸಹ ನೀರಾ ಇಳಿಸುವಾಗ ಏಕಾಏಕಿ ಅಬಕಾರಿ ಇನ್ಸ್‌ಪೆಕ್ಟರ್ ಎ.ಕೆ.ನವೀನ್ ಅವರು ತಮ್ಮ ಹತ್ತನ್ನೆರಡು ಮಂದಿ ಪಡೆಯ ಜೊತೆ ದಾಳಿ ಮಾಡಿ ಈರಣ್ಣ ಅವನ್ನು ಬಂಧಿಸಿ ಅಲ್ಲಿದ್ದ ನೀರಾ, ನೀರಾ ಇಳಿಸಲು ಬಳಸುತ್ತಿದ್ದ ಪರಿಕರಗಳನ್ನು ವಶ ಪಡಿಸಿಕೊಂಡರು.

ವಿಚಾರ ತಿಳಿದ ರೈತ ಸಂಘದ ರಾಜ್ಯಾಧ್ಯಕ್ಷ ಹೊಸಹಳ್ಳಿ ಚಂದ್ರಣ್ಣ ಹಾಗೂ ತಾಲೂಕು ಕಾರ್ಯಾಧ್ಯಕ್ಷ ಕರಿಯಪ್ಪ ಅವರು ಸ್ಥಳಕ್ಕೆ ದೌಡಾಯಿಸಿ ಅಬಕಾರಿ ಅಧಿಕಾರಿಳನ್ನು ತರಾಟೆಗೆ ತೆಗೆದುಕೊಂಡರು. ಹಳ್ಳಿಹಳ್ಳಿಯಲ್ಲಿ ಮದ್ಯವನ್ನು ಟೀ ಮಾರಿದಂತೆ ಮಾರುತ್ತಿದ್ದಾರೆ. ಹುಳಿಯಾರು ಪಟ್ಟಣದಲ್ಲಿ ಎಂಆರ್‌ಪಿ ಬೆಲೆಗಿಂತ ಹೆಚ್ಚಿನ ಬೆಲೆಗೆ ಮಾರುತ್ತಿದ್ದಾರೆ. ಈ ಬಗ್ಗೆ ಹಲವು ಬಾರಿ ದೂರು ನೀಡಿದರೂ ಕ್ರಮ ಕೈಗೊಳ್ಳದೆ ರೈತನೊಬ್ಬ ನೀರಾ ಕಟ್ಟಿರುವುದಕ್ಕೆ ಬಂಧಿಸಿರುವುದು ಎಷ್ಟು ಸರಿ ಎಂದು ಪ್ರಶ್ನಿಸಿದರಲ್ಲದೆ ಈರಣ್ಣನನ್ನು ಬಿಡುಗಡೆ ಮಾಡುವವರೆವಿಗೂ ವಾಹನ ಮುಂದೋಗಲು ಬಿಡುವುದಿಲ್ಲ ಎಂದು ಪಟ್ಟು ಹಿಡಿದರು.

ಇದಕ್ಕೆ ಪ್ರತಿಯಾಗಿ ಎ.ಕೆ.ನವೀನ್ ಅವರು ನೀರಾ ಇಳಿಸುವುದಕ್ಕೂ ಅನುಮತಿ ಪಡೆಯಬೇಕಿದೆ. ಅಲ್ಲದೆ ಐಸ್ ಬಾಕ್ಸ್‌ನಲ್ಲಿ ನೀರಾ ಇಳಿಸಿ ಹುಳಿ ಬರುವ ಮಂಚೆ ಮಾರಬೇಕೆಂಬ ನಿಯಮವಿದೆ. ಆದರೆ ನಿಯಮವನ್ನು ಗಾಳಿಗೆ ತೂರಿ ಮನಸ್ಸೋ ಇಚ್ಛೆ ಇಳಿಸುತ್ತಿರುವುದರಿಂದ ದಾಳಿ ಮಾಡಲಾಗಿದೆ. ಅನುಮತಿ ಪಡೆದು ನಿಯಮದ ಪ್ರಕಾರ ನೀರಾ ಇಳಿಸಿದರೆ ನಮ್ಮ ತಕರಾರಿಲ್ಲ ಎಂದು ಸಮಜಾಯಿಸಿ ನೀಡಿದರಲ್ಲದೆ ಮತ್ತೆ ನೀರಾ ಇಳಿಸುವುದಿಲ್ಲವೆಂದು ಬರೆದುಕೊಟ್ಟರೆ ಈರಣ್ಣನನ್ನು ಬಿಡುವುದಾಗಿ ತಿಳಿಸಿದರು.

ನೀರಾ ಒಂದು ಆರೋಗ್ಯವರ್ದಕ ಪೇಯ. ಹಲವು ಕಾಯಿಲೆಗಳಿಗೆ ರಾಮಬಾಣವಾಗಿದೆ. ಆಸಕ್ತರು ಕೇಳಿದರಷ್ಟೆ ಈತ ನೀರಾ ಇಳಿಸಿ ಕೊಡುತ್ತಾನೆ. ಅದೂ ಮೂರ್‍ನಲ್ಕು ಮರದಲ್ಲಿ ಮಾತ್ರ. ಇಡೀ ತಾಲೂಕಿನಲ್ಲಿ ಈತನೊಬ್ಬನೇ ನೀರಾ ಇಳಿಸುವ ವ್ಯಕ್ತಿ. ದಿನಕ್ಕೆ ಇನ್ನೂರರಿಂದ ಮುನ್ನೂರು ರೂ. ಇದರಿಂದ ದುಡಿದು ಬದುಕು ಕಟ್ಟಿಕೊಳ್ಳುತ್ತಿದ್ದಾನೆ. ಇಂತಹ ಬಡವನ ಹೊಟ್ಟೆ ಮೇಲೆ ಹೊಡೆಯಲು ಹೊರಟಿರುವುದು ನ್ಯಾಯವೇ. ಹಳ್ಳಿಹಳ್ಳಿಗಳಲ್ಲಿ ಅಕ್ರಮ ಮದ್ಯ ಮಾರಿ ಚಿಕ್ಕಮಕ್ಕಳನ್ನೂ ಕುಡುಕರನ್ನಾಗಿಸುತ್ತಿರುವ ಶ್ರೀಮಂತರು ನಿಮ್ಮ ಕಣ್ಣಿಗೆ ಕಾಣುವುದಿಲ್ಲವೇ ಎಂದು ಖಾರವಾಗಿ ಪ್ರಶ್ನಿಸಿದರು.

ನಮ್ಮ ಕರ್ತವ್ಯಕ್ಕೆ ನೀವು ಅಡ್ಡಿಪಡಿಸುವುದು ಸರಿಯಲ್ಲ ಜಾಗ ಬಿಡಿ ಎಂದು ಕೇಳಿಕೊಂಡು ನವೀನ್ ಅವರು ಜೀಪ್ ಹತ್ತಿ ಹೋಗಲು ಮುಂದಾದರು. ಆಗ ಚಂದ್ರಣ್ಣ ಜೀಪ್‌ಗೆ ಅಡ್ಡಲಾಗಿ ಕುಳಿತು ನನಗೂ ಕಾನೂನು ಗೊತ್ತಿದೆ. ನೀವು ಎಷ್ಟರಮಟ್ಟಿಗೆ ಕಾನೂನು ಪಾಲನೆ ಮಾಡುತ್ತಿದ್ದೀರಿ ಎಂಬುದನ್ನು ತಾಲೂಕಿನ ಅಕ್ರಮ ಮದ್ಯದ ಅಡ್ಡಗಳು ಹೇಳುತ್ತಿವೆ. ಅಮಾಯಕ ರೈತ ಈರಣ್ಣನನ್ನು ಬಿಟ್ಟು ವಶಪಡಿಸಿಕೊಂಡಿರುವ ಪರಿಕರಳನ್ನು ಕೊಟ್ಟರಷ್ಟೆ ಬಿಡುತ್ತೇನೆ ಎಂದು ಪಟ್ಟು ಹಿಡಿದರು. ಅಂತಿಮವಾಗಿ ಈರಣ್ಣ ಅವರನ್ನು ಬಿಟ್ಟು ಪರಿಕರಗಳನ್ನು ಕೊಟ್ಟು ಇನ್ಮುಂದೆ ನೀರಾ ಇಳಿಸಬೇಡ ಎಂದು ಎಚ್ಚರಿಕೆ ಕೊಟ್ಟು ಅಬಕಾರಿ ಅಧಿಕಾರಿಗಳು ಹೋದರು.

### ‘ಬುಕ್ಕಾಪಟ್ಟಣ ಚಿಂಕಾರ ವನ್ಯಜೀವಿಧಾಮದ ಪರಿಸರ ಸೂಕ್ಷ್ಮ ಪ್ರದೇಶದಲ್ಲಿ ಗಣಿಗಾರಿಕೆ ಬೇಡ’

## ಗಣಿಗಾರಿಕೆಯಿಂದ ಮಾನವ-ವನ್ಯಜೀವಿ ಸಂಘರ್ಷ ಹೆಚ್ಚಳ; ಮಾಲತೇಶ್ ಅರಸ್

ಚಿತ್ರದುರ್ಗ: ತುಮಕೂರು ಜಿಲ್ಲೆಯ ಬುಕ್ಕಾಪಟ್ಟಣ ಚಿಂಕಾರ ವನ್ಯಜೀವಿಧಾಮದ ಪರಿಸರ ಸೂಕ್ಷ್ಮ ಪ್ರದೇಶದ 120 ಎಕರೆ ಪ್ರದೇಶದಲ್ಲಿ ಕಬ್ಬಿಣದ ಅದಿರು ಗಣಿಗಾರಿಕೆ ನಡೆಸಲು ಅರಣ್ಯ ಇಲಾಖೆ ಶಿಫಾರಸು ಮಾಡಿರುವುದು ಪರಿಸರ ಸರ್ವನಾಶಕ್ಕೆ ಅವಕಾಶ ಮಾಡಿಕೊಟ್ಟಂತಾಗಿದ್ದು ಅರಣ್ಯ ಇಲಾಖೆಯು ತಕ್ಷಣವೇ ಈ ಶಿಫಾರಸುಗಳನ್ನು ಹಿಂಪಡೆಯಬೇಕು ಹಾಗೂ ರಾಜ್ಯ ವನ್ಯಜೀವಿ ಮಂಡಳಿ ಮತ್ತು ಸರ್ಕಾರವು ಈ ಶಿಫಾರಸನ್ನು ತಿರಸ್ಕರಿಬೇಕೆಂದು ಪರಿಸರ ಮತ್ತು ವನ್ಯಜೀವಿ ಸಂರಕ್ಷಣಾ ವೇದಿಕೆ ಆಗ್ರಹಿಸಿದೆ.




ಈ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮತ್ತು ಪರಿಸರ ಮತ್ತು ಅರಣ್ಯ, ಜೀವಶಾಸ್ತ್ರ ಸಚಿವರಾದ ಈಶ್ವರ ಖಂಡ್ರೆ ಅವರಿಗೆ ಚಿತ್ರದುರ್ಗ ಜಿಲ್ಲಾ ಅಪರ ಜಿಲ್ಲಾಧಿಕಾರಿಗಳಾದ ಬಿ.ಟಿ ಕುಮಾರಸ್ವಾಮಿ ಅವರ ಮುಖಾಂತರ ಮನವಿ ಸಲ್ಲಿಸಿದರು.

ಗಣಿಗಾರಿಕೆಗೆ ಪ್ರಸ್ತಾವನೆ ಆಗಿರುವ ಪ್ರದೇಶವು ಬರಪೀಡಿತ ಪ್ರದೇಶದ ವ್ಯಾಪ್ತಿಗೆ ಸೇರುತ್ತದೆ. ಇದೇ ಪ್ರದೇಶದಲ್ಲಿ ಈ ಹಿಂದೆ ಅಕ್ರಮ ಗಣಿಗಾರಿಕೆಯಿಂದ ಬಹುತೇಕ ಪರಿಸರ ನಾಶವಾಗಿರುತ್ತದೆ. ಹಾಗೆಯೇ ಅನೇಕ ಜಿಲ್ಲೆಯಲ್ಲಿ ರಸ್ತೆಗಳ ಅಗಲೀಕರಣಕ್ಕಾಗಿ ಲಕ್ಷಾಂತರ ಮರಗಳನ್ನು ಬಲಿ ಕೊಡಲಾಗಿದ್ದು, ಅದಕ್ಕೆ ಬದಲಾಗಿ ಮರಗಳನ್ನು ಬೆಳೆಸುವ ಅರಣ್ಯೀಕರಣ ಯೋಜನೆ ಕಾರ್ಯರೂಪಕ್ಕೆ ಬಂದಿರುವುದಿಲ್ಲ. ಇದರ ಜೊತೆಗೆ ಗೋಮಾಳಗಳನ್ನು ಸೋಲಾರ್ ಪಾರ್ಕ್ ಮತ್ತು ವಿವಿಧ ಯೋಜನೆಗಳನ್ನು ನಿರ್ಮಾಣ ಮಾಡಲು ನೀಡಲಾಗುತ್ತಿದ್ದು, ಇದರಿಂದ ಎಲ್ಲಾ ಜಿಲ್ಲೆಯಲ್ಲಿ ಲಕ್ಷಾಂತರ ಮರಗಳ ಹನನವಾಗುತ್ತಿದೆ.

ಈಗಾಗಲೇ ತುಮಕೂರು ಜಿಲ್ಲೆಯಲ್ಲಿ ವನ್ಯಪ್ರಾಣಿಗಳ ವಾಸಸ್ಥಾನ ಹಸ್ತಕ್ಷೇಪದಿಂದ ಮಾನವ ಮತ್ತು ವನ್ಯಪ್ರಾಣಿಗಳ ನಡುವೆ ಸಂಘರ್ಷ ಸಾಕ್ಷಿದೆ. ಈಗ ಮತ್ತೆ ಸಂರಕ್ಷಿತ ಅರಣ್ಯವನ್ನು ಗಣಿಗಾರಿಕೆಗೆ ನೀಡಿದರೆ, ಅದು ಮತ್ತಷ್ಟು ಹೆಚ್ಚುತ್ತದೆ. ಇದು ರೈತರನ್ನು ಮತ್ತಷ್ಟು ಸಂಕಷ್ಟಕ್ಕೀಡು ಮಾಡುತ್ತದೆ. ತಕ್ಷಣವೇ ಬುಕ್ಕಾಪಟ್ಟಣ ವನ್ಯಜೀವಿಧಾಮದ ಬಳಿ ಅಥವಾ ಜಿಲ್ಲೆಯ ಅರಣ್ಯ ಪ್ರದೇಶದಲ್ಲಿ ಯಾವುದೇ ಗಣಿಗಾರಿಕೆಗೆ ಅನುಮತಿಯನ್ನು ನೀಡಬಾರದು ಮತ್ತು ಈಗ ನೀಡಿರುವ ಶಿಫಾರಸ್ಸನ್ನು ವಾಪಸ್ಸು ಪಡೆಯಬೇಕು, ಇಲ್ಲ ತಿರಸ್ಕರಿಸಬೇಕು ಎಂದು ಪರಿಸರ ಮತ್ತು ವನ್ಯಜೀವಿ ಸಂರಕ್ಷಣಾ ವೇದಿಕೆ ರಾಜ್ಯ ಪ್ರಧಾನ ಕಾರ್ಯದರ್ಶಿ ಮಾಲತೇಶ್ ಅರಸ್, ರಾಜ್ಯ ಸಂಚಾಲಕರಾದ ಟಿ.ರುದ್ರಮುನಿ, ಜಲ ಜಾಗೃತಿ ವಿಭಾಗದ ಉಪಾಧ್ಯಕ್ಷರಾದ ಕೆ.ಓಂಕಾರಪ್ಪ, ಹೊಳಲ್ಕೆರೆ ತಾಲ್ಲೂಕು ಅಧ್ಯಕ್ಷರಾದ ಬಸವರಾಜ್, ಚಿತ್ರದುರ್ಗ ತಾಲ್ಲೂಕು ಅಧ್ಯಕ್ಷರಾದ ಮಂಜುನಾಥ್ ಮಾರಘಟ್ಟ, ಸದಸ್ಯರಾದ ಅಜಯ್, ಆಗ್ರಹಿಸಿದ್ದಾರೆ.

## ಬಸ್ ಸಿಬ್ಬಂದಿ ಮೇಲಿನ ಹಲ್ಲೆಗೆ ಸಂಘಟನೆಗಳ ಖಂಡನೆ

### ಸಾರಿಗೆ ಸಂಸ್ಥೆ ನಿವೃತ್ತ ನೌಕರರ ನೇತೃತ್ವದಲ್ಲಿ ಸಂಘಟನೆಗಳ ಪ್ರತಿಭಟನೆ

ತುಮಕೂರು: ಬೆಳಗಾವಿಯ ಬಾಳೆಕುಂದ್ರಿಯಲ್ಲಿ ಕೆಎಸ್‌ಆರ್‌ಟಿಸಿಯ ಚಾಲಕ, ನಿರ್ವಾಹಕರ ಮೇಲೆ ಪುಂಡರು ನಡೆಸಿದ ಹಲ್ಲೆ ಖಂಡಿಸಿ, ಆರೋಪಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿ ರಾಜ್ಯ ರಸ್ತೆ ಸಾರಿಗೆ ನಿಗಮದ ತುಮಕೂರು ವಿಭಾಗದ ನಿವೃತ್ತ ನೌಕರರು ವಿವಿಧ ಸಂಘಟನೆಗಳ ಬೆಂಬಲದೊಂದಿಗೆ ಶುಕ್ರವಾರ ನಗರದಲ್ಲಿ ಪ್ರತಿಭಟನೆ ನಡೆಸಿದರು.



ದೇವರಾಜ ಅರಸು ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದಿಂದ ಪಾದಯಾತ್ರೆಯಲ್ಲಿ ಸಾಗಿ ಜಿಲ್ಲಾಧಿಕಾರಿ ಕಚೇರಿ ಬಳಿ ಪ್ರತಿಭಟನೆ ನಡೆಸಿದರು. ನಂತರ ಜಿಲ್ಲಾಧಿಕಾರಿಗಳ ಮೂಲಕ ಸರ್ಕಾರಕ್ಕೆ ಮನವಿ ಪತ್ರ ಸಲ್ಲಿಸಿದರು.

ಸಾರಿಗೆ ಸಂಸ್ಥೆಯ ನಿವೃತ್ತ ನೌಕರರ ಹೋರಾಟ ಬೆಂಬಲಿಸಿ ಮಾತನಾಡಿದ ಕನ್ನಡ ಸೇನೆ ಜಿಲ್ಲಾಧ್ಯಕ್ಷ ಧನಿಯಾಕುಮಾರ್, ಬೆಳಗಾವಿಯಲ್ಲಿ ಎಂಇಎಸ್‌ನವರು ಪದೇಪದೆ ಕನ್ನಡಿಗರ ಮೇಲೆ ಹಲ್ಲೆ ಮಾಡುತ್ತಿದ್ದಾರೆ, ನಮ್ಮ ಸಾರಿಗೆ ಸಂಸ್ಥೆ ಬಸ್ ಹಾಗೂ ಬಸ್ ಸಿಬ್ಬಂದಿ ಮೇಲೆ ದೌರ್ಜನ್ಯ ನಡೆಸುತ್ತಿದ್ದಾರೆ. ಇವರ ಉಪಟಳಕ್ಕೆ ಕಡಿವಾಣ ಹಾಕುವಲ್ಲಿ ಸರ್ಕಾರ ವಿಫಲವಾಗಿದೆ. ಬೆಳಗಾವಿ ರಾಜಕಾರಣಿಗಳು ವೋಟಿಗಾಗಿ ಮರಾಠಿಗರನ್ನು ಓಲೈಕೆ ಮಾಡಿಕೊಂಡು ಕನ್ನಡ ಭಾಷೆ, ಕನ್ನಡಿಗರ ಹಿತ ಕಡೆಗಣಿಸುತ್ತಿದ್ದಾರೆ ಎಂದು ಟೀಕಿಸಿದರು.

ಕನ್ನಡಿಗರ ಮೇಲೆ ದೌರ್ಜನ್ಯ, ದಬ್ಬಾಳಿಕೆ ಮಾಡುತ್ತಿರುವ ಎಂಇಎಸ್ ಪುಂಡರ ವಿರುದ್ಧ ಸರ್ಕಾರ ಮೃದು ಧೋರಣೆ ತಳೆಯದೆ ಕಠಿಣ ಕ್ರಮ ತೆಗೆದುಕೊಳ್ಳಬೇಕು. ಬೆಳಗಾವಿ ರಾಜಕಾರಣಿಗಳು ಎಂಇಎಸ್‌ನ ಕಾರ್ಯಕರ್ತರಿಗೆ ತಿಳುವಳಿಕೆ ಹೇಳಬೇಕು ಇಲ್ಲವೇ ಸರ್ಕಾರ ಎಂಇಎಸ್ ಸಂಘಟನೆಯನ್ನು ನಿಷೇಧಿಸಬೇಕು. ರಾಜ್ಯದ ಗಡಿ ಭಾಗದಲ್ಲಿ ಕನ್ನಡಿಗರಿಗೆ ರಕ್ಷಣೆ ನೀಡಬೇಕು, ಅಲ್ಲಿ ಶಾಂತಿ, ಸೌಹಾರ್ದತೆ ನೆಲೆಸಲು ಸರ್ಕಾರ ಕ್ರಮ ತೆಗೆದು ಕೊಳ್ಳಬೇಕು ಎಂದು ಒತ್ತಾಯಿಸಿದರು.

ಕನ್ನಡ ಚಲನಚಿತ್ರನಟರು ಕನ್ನಡಿಗರ ಮೇಲಿನ ದೌರ್ಜನ್ಯದ ವಿರುದ್ಧ ಧ್ವನಿ ಎತ್ತಿ ಬೀದಿಗಿಳಿದು ಹೋರಾಟ ಮಾಡಬೇಕು. ಈ ತಿಂಗಳ 22ರಂದು ವಿವಿಧ ಸಂಘಟನೆಗಳು ಕರೆ ನೀಡಿರುವ ಕರ್ನಾಟಕ ಬಂದ್‌ಗೆ ಚಿತ್ರರಂಗದವರು, ರಾಜ್ಯದ ಎಲ್ಲಾ ಸಂಘಟನೆಗಳೂ ಬೆಂಬಲ ನೀಡಿ ಕನ್ನಡಿಗರ ಒಗ್ಗಟ್ಟು ಪ್ರದರ್ಶಿಸಬೇಕು ಎಂದು ಧನಿಯಾಕುಮಾರ್ ಮನವಿ ಮಾಡಿದರು.

ಸಾರಿಗೆ ಸಂಸ್ಥೆಯ ನಿವೃತ್ತ ನೌಕರರ ಕ್ಷೇಮಾಭಿವೃದ್ಧಿ ಟ್ರಸ್ಟ್ ಖಜಾಂಚಿ ಶಿವಶಂಕರ್ ಮಾತನಾಡಿ, ಬೆಳಗಾವಿ ಸುಳೆಭಾವಿ ಮಾರ್ಗದಲ್ಲಿ ಕಾರ್ಯಾಚರಣೆಯಲ್ಲಿದ್ದ ಸಂದರ್ಭದಲ್ಲಿ ಬಾಳೆಕುಂದ್ರಿ ಬಸ್ ನಿಲ್ದಾಣದ ಬಳಿ ಬಸ್ ನಿರ್ವಾಹಕ ಮಹಾದೇವಪ್ಪ ಮಲ್ಲಪ್ಪ ಹುಕ್ಕೇರಿ ಅವರ ಮೇಲೆ ಕೆಲವರು ಮರಾಠಿ ಭಾಷೆಯಲ್ಲಿ ಮಾತನಾಡು ಎಂದು ಒತ್ತಾಯಿಸಿ ಹಲ್ಲೆ ಮಾಡಿರುವುದು ಖಂಡನೀಯ ಎಂದರು.

ಕರ್ನಾಟಕದಲ್ಲಿ ಕನ್ನಡವೇ ಅಧಿಕೃತ ಭಾಷೆಯಾಗಿದ್ದು, ಕನ್ನಡದಲ್ಲಿ ವ್ಯವಹರಿಸುವುದು ಕರ್ತವ್ಯ. ಹೀಗಿದ್ದೂ ಸಂಸ್ಥೆ ಸಿಬಂದಿ ಮೇಲೆ ಹಲ್ಲೆ ಮಾಡಿರುವುದು ಖಂಡನೀಯ. ಪ್ರಕರಣ ಖಂಡಿಸಿ, ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ತೆಗೆದುಕೊಳ್ಳಬೇಕು. ಸರಿಗೆ ಸಂಸ್ಥೆ ಸಿಬ್ಬಂದಿಹಗೆ ಸರ್ಕಾರ ಸೂಕ್ತ ರಕ್ಷಣೆ ನೀಡಬೇಕು. ಹಲ್ಲೆಗೊಳಗಾಗಿ ಚಿಕಿತ್ಸೆ ಪಡೆಯುತ್ತಿರುವ ಸಿಬ್ಬಂದಿಗೆ ವೇತನ ಸಹಿತ ರಜೆ ನೀಡಬೇಕು ಎಂದು ಒತ್ತಾಯಿಸಿದರು.

ಸಂಘಟನೆಯ ಮುಖಂಡ ಆರ್.ಎನ್. ವೆಂಕಟಾಚಲ ಮಾತನಾಡಿ, ಕನ್ನಡಿಗರು ಎಲ್ಲರನ್ನೂ ಗೌರವಿಸುವ, ಸೌಹಾರ್ದತೆಯಿಂದ ನಡೆದುಕೊಳ್ಳುವ ಮನೋಭಾವದವರು. ಮಹಾರಾಷ್ಟ್ರದಲ್ಲಿ ಜನಿಸಿದ ಡಾ.ಬಿ.ಆರ್. ಅಂಬೇಡ್ಕರ್, ಶಿವಾಜಿ ಅವರನ್ನೂ ಪೂಜಿಸಿ ಗೌರವಿಸುವ ಕನ್ನಡಿಗರ ಮೇಲೆ ಎಂಇಎಸ್ ನವರ ದೌರ್ಜನ್ಯ ಸರಿಯಲ್ಲ, ಕನ್ನಡಿಗರ ತಾಳ್ಮೆ ಕೆಣಕುತ್ತಿರುವ ಅವರಿಗೆ ಸರ್ಕಾರ ತಕ್ಕ ಪಾಠ ಕಲಿಸಬೇಕು. ಎರಡೂ ರಾಜ್ಯಗಳ ಸರ್ಕಾರಗಳು ಈ ಪ್ರಕರಣವನ್ನು ಗಂಭೀರವಾಗಿ ತೆಗೆದುಕೊಂಡು ಮರುಕಳಿಸದಂತೆ ಎಚ್ಚರಿಕೆ ಕ್ರಮ ತೆಗೆದುಕೊಳ್ಳಬೇಕು ಎಂದು ಆಗ್ರಹಿಸಿದರು.

## ಕುಣಿಗಲ್ ದೊಡ್ಡಕೆರೆಯಲ್ಲಿ ಶುಕ್ರವಾರ ಸುಮಾ ಶವ ಪತ್ತೆ

ಕುಣಿಗಲ್ : ದೊಡ್ಡ ಕೆರೆಗೆ ಯುವತಿಯೊಬ್ಬಳು ಹಾರಿ ಆತ್ಮಹತ್ಯೆ ಮಾಡಿಕೊಂಡಿರಬಹುದೆಂದು ಸಂಶಯಿಸಿ ಹುಡುಕಾಟ ನಡೆಸಿದ್ದು ಆಕೆಯ ಶವವು ಶುಕ್ರವಾರ ಬೆಳಿಗ್ಗೆ ಪತ್ತೆಯಾಗಿದೆ.



ತಾಲೂಕಿನ ಕೊತ್ತಗೆರೆ ಹೋಬಳಿ ಸೊಬಗನಹಳ್ಳಿ ಗ್ರಾಮದ ಸುಮಾ(25) ಇಂಜಿನಿಯರಿಂಗ್ ಪದವಿಧರೆ ಆಗಿದ್ದು ಬೆಂಗಳೂರಿನ ಖಾಸಗಿ ಕಾರ್ಖಾನೆಯಲ್ಲಿ ಕೆಲಸ ಮಾಡುತ್ತಿದ್ದು ಗುರುವಾರ ಬೆಳಿಗ್ಗೆ ಗ್ರಾಮದಿಂದ ಕುಣಿಗಲ್ ಗೆ ಬಂದು ಸರ್ಕಾರಿ ಬಸ್ ನಲ್ಲಿ ಬೆಂಗಳೂರಿಗೆ ಹೋಗಿದ್ದು ಮತ್ತೆ 11 ಗಂಟೆಗೆ ತುರುವೇಕೆರೆ ಬಸ್ ನಲ್ಲಿ ಕುಣಿಗಲ್ ಗೆ ಬಂದಿದ್ದು ಮಧ್ಯಾಹ್ನ ಗಣಪತಿ ದೇವಾಲಯದ ಮುಂಭಾಗದ ಬಳಿಯ ದೊಡ್ಡಕೆರೆ ಹಳೆಯ ಜಾಕ್ ವೆಲ್ ಸಮೀಪ ಬಂದು ಮೊಬೈಲು, ಹಾಗೂ ಇನ್ನಿತರ ವಸ್ತುಗಳನ್ನು ಇಟ್ಟು ಕೆರೆಗೆ ಹಾರಿ ಆತ್ಮಹತ್ಯೆ ಮಾಡಿಕೊಂಡಿರ ಬಹುದೆಂಬ ಸಂಶಯದಿಂದ ಸಂಜೆ ಪೊಲೀಸ್ ಅಗ್ನಿಶಾಮಕ ದಳ ಸಿಬ್ಬಂದಿಗಳು ಹುಡುಕಾಟ ನಡೆಸಿದರು ಪತ್ತೆಯಾಗಿರಲಿಲ್ಲ.


ಶುಕ್ರವಾರ ಬೆಳಿಗ್ಗೆ ಉಡುಪಿಯ ಮಲ್ಪೆಯಿಂದ ಮುಳುಗು ತಜ್ಞ ಈಶ್ವರ್ ಎಂಬುವರು ಆಗಮಿಸಿ ಕೆರೆಯಲ್ಲಿಇಳಿದು ಶೋಧ ನಡೆಸಿ ಸುಮಾರು 20 ಅಡಿ ಆಳದಲ್ಲಿ ಇದ್ದ ಶವವನ್ನು ಮೇಲಕ್ಕೆ ತಂದಿದ್ದಾರೆ ಪೊಲೀಸರು ಶವವನ್ನು ಆಸ್ಪತ್ರೆಗೆ ಸಾಗಿಸಿ ಮರಣೋತ್ತರ ಪರೀಕ್ಷೆಯ ನಂತರ ಕುಟುಂಬದವರು ಸೋಬಗನಹಳ್ಳಿ ಗ್ರಾಮದಲ್ಲಿ ಅಂತ್ಯಕ್ರಿಯ ನಡೆಸಿದ್ದಾರೆ. ಕುಣಿಗಲ್ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ.

**ಆತ್ಮಹತ್ಯೆ ಮಾಡಿಕೊಳ್ಳಬಾರದು :–**

ಉಡುಪಿಯ ಪ್ರಖ್ಯಾತ ಮುಳುಗು ತಜ್ಞರಾದ ಮಲ್ಪೆಯ ಈಶ್ವರ ಮಾತನಾಡುತ್ತಾ ಯಾರು ಆತ್ಮಹತ್ಯೆ ಮಾಡಿಕೊಳ್ಳಬಾರದು, ಒಂದೆಡೆ ಕುಳಿತು ಚರ್ಚೆ ಮಾಡಿ ಸಮಸ್ಯೆ ಬಗೆಹರಿಸಿಕೊಳ್ಳಬೇಕು . ಯಾವುದೇ ಸಮಸ್ಯೆಗೆ ಉತ್ತರ ಇದ್ದೇ ಇದೆ, ಕೈಲಾದಷ್ಟು ದುಡಿದು ನೆಮ್ಮದಿಯಿಂದ ಬದುಕು ರೂಪಿಸಿಕೊಳ್ಳುವ ಮೂಲಕ ಯಶಸ್ವಿಯಾಗಿ ಜೀವನ ಸಾಗಿಸಬೇಕು ಎಂದು ಮನವಿ ಮಾಡಿದ ಅವರು ಇಲ್ಲಿನ ವಿಷಯ ಫೋನ್ ಮೂಲಕ ನನ್ನನ್ನು ಸಂಪರ್ಕಿಸಿ ಬರುವಂತೆ ಕೋರಿಕೊಂಡ ಹಿನ್ನೆಲೆಯಲ್ಲಿ ಇಲ್ಲಿಗೆ ಬಂದು ಕರ್ತವ್ಯ ನಿರ್ವಹಿಸಲು ಸ್ನೇಹಿತರು ನೆರವು ನೀಡಿದ್ದಾರೆ ಎಂದರು.

## ‘ಒಳಮೀಸಲಾತಿ ಜಾರಿಯಾಗುವವರೆಗೆ ಬ್ಯಾಕ್‌ಲಾಗ್ ಹುದ್ದೆಗಳ ಭರ್ತಿ ಬೇಡ’

ತುಮಕೂರು: ಒಳಮೀಸಲಾತಿ ಜಾರಿಯಾಗುವವರೆಗೂ ಬ್ಯಾಕ್‌ಲಾಗ್ ಸೇರಿದಂತೆ ಯಾವುದೇ ಸರಕಾರಿ ಹುದ್ದೆಗಳನ್ನು ತುಂಬ ಬಾರದು, ಜಿಲ್ಲೆಯ ಮಾದಿಗ ಸಮುದಾಯದ ಮುಖಂಡರಿಗೆ ವಿಧಾನ ಪರಿಷತ್ ಹಾಗೂ ವಿವಿಧ ನಿಗಮ ಮಂಡಳಿಗಳ ಪದಾಧಿಕಾರಿಗಳ ಹುದ್ದೆ ನೀಡಬೇಕೆಂದು ಆಗ್ರಹಿಸಿ ಇಂದು ಮಾದಿಗ ಸಂಘಟನೆಗಳ ಒಕ್ಕೂಟದವತಿಯಿಂದ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.



ರಾಜ್ಯದಲ್ಲಿ ಒಳಮೀಸಲಾತಿ ಜಾರಿಗೆ ಸಂಬಂಧಿಸಿದಂತೆ ಪ್ರಕ್ರಿಯೆ ಚಾಲ್ತಿಯಲ್ಲಿದ್ದು, ನ್ಯಾ.ನಾಗಮೋಹನ್ ದಾಸ್ ನೇತೃತ್ವದ ಸಮಿತಿ ಅಗತ್ಯ ದಾಖಲೆಗಳನ್ನು ಕಲೆ ಹಾಕಿದ್ದು, ಶೀಘ್ರದಲ್ಲಿಯೆ ವರದಿ ನೀಡುವ ಸಾಧ್ಯತೆ ಇದೆ. ಇಂತಹ ಸಮಯ ವಿಳಂಭ ಕಾರಣ ನೀಡಿ ಬ್ಯಾಕ್‌ಲಾಗ್ ಹುದ್ದೆಗಳ ಭರ್ತಿಗೆ ಅನುಮತಿ ಕೋರಿರುವುದು ದುರದೃಷ್ಟಕರ. ಹಾಗಾಗಿ ಸರಕಾರ ಯಾವ ಕಾರಣಕ್ಕೂ ಒಳಮೀಸಲಾತಿ ಜಾರಿಯಗುವವರೆಗೂ ಸರಕಾರಿ ಹುದ್ದೆಗಳನ್ನು ತುಂಬಬಾರದು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

ಮನವಿ ಸಲ್ಲಿಸಿದ ನಂತರ ಮಾತನಾಡಿದ ಮಾದಿಗ ಸಂಘಟನೆಗಳ ಒಕ್ಕೂಟದ ಅಧ್ಯಕ್ಷರಾದ ಕೋಡಿಯಾಲ ಮಹದೇವ್,ಸುಮಾರು 3 ದಶಕಗಳ ಹೋರಾಟದ ಫಲವಾಗಿ ಸುಪ್ರಿಂ ಕೋರ್ಟು ಒಳಮೀಸಲಾತಿ ಜಾರಿಯ ಅಧಿಕಾರ ವನ್ನು ರಾಜ್ಯ ಸರಕಾರಕ್ಕೆ ನೀಡಿದೆ. ಇಂತಹ ವೇಳೆಯಲ್ಲಿ ಎಂಪೆರಿಕಲ್ ಡಾಟಾ ಪಡೆಯಲು ಸರಕಾರ ನ್ಯಾ.ನಾಗಮೋಹನ್ ದಾಸ್ ಸಮಿತಿ ರಚಿಸಿ ವರದಿ ನೀಡಲು ಸೂಚನೆ ನೀಡಿದೆ. ಸರಕಾರದ ಮೇಲೆ ಭರವಸೆ ಇಟ್ಟುಕೊಂಡು ಮಾದಿಗ ಸಮುದಾಯ ಜಾತಕ ಪಕ್ಷಿಯಂತೆ ಕಾಯುತ್ತಿರುವ ವೇಳೆಯಲ್ಲಿ ಕೆಲ ಇಲಾಖೆಗಳ ಖಾಲಿ ಇರುವ ಹುದ್ದೆ ತುಂಬಲು ಪ್ರಯತ್ನ ನಡೆಸಿರುವುದು ಖಂಡನೀಯ. ಇದರಿಂದ ಮಾದಿಗ ಸಮುದಾಯಕ್ಕೆ ತುಂಬಲಾರದ ನಷ್ಟ ಉಂಟಾಗುತ್ತದೆ. ಹಾಗಾಗಿ ಸರಕಾರ ಒಳಮೀಸಲಾತಿ ಜಾರಿಯ ವರೆಗೂ ಯಾವುದೇ ಒತ್ತಡಕ್ಕೆ ಮಣಿಯದೆ ಸರಕಾರವೇ ನೀಡಿರುವ ಸುತ್ತೊಲೆಗೆ ಬದ್ದವಾಗಿರಬೇಕು ಎಂದು ಒತ್ತಾಯಿಸಿದರು. ಮಾದಿಗ ಮುಖಂಡರಾದ ಹೆತ್ತೇನಹಳ್ಳಿ ಮಂಜುನಾಥ್, ದಲಿತ ಮುಖಂಡರಾದ ಮೋಹನ್ ಮಾತನಾಡಿದರು. ಈ ವೇಳೆ ಮಾದಿಗ ಸಂಘಟನೆಗಳ ಒಕ್ಕೂಟದ ಡಿ.ಜಿ.ಸಾಗರ್,ಸೋರೆಕುಂಟೆ ಯೋಗೀಶ್, ಎಸ್.ಪಿ.ರಾಜಣ್ಣ, ಕೆಸ್ತೂರ್ ಮೂರ್ತಿ, ಪರಮೇಶ್, ರಾಜು ಕೋರ, ಅಂಗಲಕುಂಟೆ ರಂಗಸ್ವಾಮಿ,ಪಿ.ಎನ್.ರಾಮಯ್ಯ ಸೇರಿದಂತೆ ಹಲವರು ಪಾಲ್ಗೊಂಡಿದ್ದರು.

